# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| 1 ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ | : | 127 (1301) |
| 2 ಸದಸ್ಯರ ಹೆಸರು | : | ಶ್ರೀ ನಿರಾಣಿ ಹನುಮಂತ್ ರುದ್ರಪ್ಪ(ಪದವೀಧರ ಕ್ಷೇತ್ರ) |
| 3 ಉತ್ತರಿಸುವ ದಿನಾಂಕ | : | 22.08.2025 |
| 4 ಉತ್ತರಿಸುವ ಸಚಿವರು | : | ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖಾ ಸಚಿವರು |

*****

| | ಪ್ರಶ್ನೆ | ಉತ್ತರ |
|---|---|---|
| (ಅ) | ಕರ್ನಾಟಕ ವಿಧಾನ ಪರಿಷತ್ ಸದಸ್ಯರ ಸ್ಥಳೀಯ ಪ್ರದೇಶ ಅಭಿವೃದ್ಧಿ ಅನುದಾನವನ್ನು ಎರಡು ವರ್ಷದ ಮೇಲ್ಪಟ್ಟು ಕಾಮಗಾರಿಗಳನ್ನು ಅನುಷ್ಠಾನಗೊಳಿಸದೇ ತಡೆಹಿಡಿಯಲು ಕಾರಣಗಳೇನು; (ಮಾಹಿತಿ ನೀಡುವುದು) | ಕರ್ನಾಟಕ ಶಾಸಕರ ಸ್ಥಳೀಯ ಪ್ರದೇಶಾಭಿವೃದ್ಧಿ ಯೋಜನೆಯಡಿ ಎರಡು ವರ್ಷ ಮೇಲ್ಪಟ್ಟು ಅನುಷ್ಠಾನವಾಗದ ಕಾಮಗಾರಿಗಳನ್ನು ತಡೆಹಿಡಿದಿರುವುದಿಲ್ಲ.<br><br>ಆದರೆ, ಕರ್ನಾಟಕ ಶಾಸಕರ ಸ್ಥಳೀಯ ಪ್ರದೇಶಾಭಿವೃದ್ಧಿ ಯೋಜನೆಯ ಮಾರ್ಗಸೂಚಿ ಕಂಡಿಕೆ-4.1 ರನ್ವಯ ಜಿಲ್ಲಾಧಿಕಾರಿಗಳಿಗೆ ಅನುಷ್ಠಾನದಲ್ಲಿರುವ ಕಾಮಗಾರಿಗಳ ವಾಸ್ತವಿಕ ಮತ್ತು ಹಣಕಾಸು ಪ್ರಗತಿಯ ಆಧಾರದ ಮೇಲೆ ಹಾಗೂ ಕಾಮಗಾರಿಗಳಿಗೆ ಇನ್ನೂ ಹೆಚ್ಚಿನ ನಿಧಿಗಳ ಅಗತ್ಯತೆಯ ಆಧಾರದ ಮೇಲೆ ನಿಧಿಯನ್ನು ವರ್ಷಕ್ಕೆ ಎರಡು ಕಂತುಗಳಲ್ಲಿ ಬಿಡುಗಡೆ ಮಾಡತಕ್ಕದ್ದು, ನಿರ್ದಿಷ್ಟ ವರ್ಷದಲ್ಲಿ ಬಿಡುಗಡೆಯಾದ ನಿಧಿಗಳ ಪೈಕಿ ಬಳಕೆಯಾಗದೆ ಉಳಿದ ಹಣ ಜಿಲ್ಲಾಧಿಕಾರಿಗಳ ಬಳಿ ಇದ್ದರೆ, ಅದನ್ನು ಮುಂದಿನ ವರ್ಷಕ್ಕೆ ಮಾತ್ರ ಉಪಯೋಗಿಸಬಹುದಾಗಿದೆ. ಆ ಮೊತ್ತವು ಮುಂದಿನ ವರ್ಷದ ಕೊನೆಯಲ್ಲಿ ಖರ್ಚಾಗದೆ ಉಳಿದರೆ ಆ ಮೊತ್ತವನ್ನು ರದ್ದುಪಡಿಸಲಾಗುವುದು. ಅಲ್ಲದೆ, ಆ ವರ್ಷದಲ್ಲಿ ನಿಧಿಗಳಲ್ಲಿ ಕ್ಲೇಮು ಮಾಡದಿದ್ದಲ್ಲಿ ಹಣಕಾಸು ವರ್ಷದ ಕೊನೆಯಲ್ಲಿ ಹಂಚಿಕೆಯನ್ನು ರದ್ದುಪಡಿಸತಕ್ಕದ್ದು ಎಂದು ಮಾರ್ಗಸೂಚಿಯಲ್ಲಿರುವುದರಿಂದ ಎರಡು ವರ್ಷದ ನಂತರ ಅನುಷ್ಠಾನಗೊಳಿಸಲು ಮಾರ್ಗಸೂಚಿಯಡಿ ಅವಕಾಶವಿರುವುದಿಲ್ಲ. |
| (ಆ) | ಶಾಸಕರ ಪ್ರದೇಶ ಅಭಿವೃದ್ಧಿ ಅನುದಾನವನ್ನು ಶಾಸಕರ ಗಮನಕ್ಕೆ ತರದೇ ಕಾಮಗಾರಿಗಳನ್ನು ತಡೆಹಿಡಿಯಲಾಗಿದೆಯೇ; ತಡೆಹಿಡಿದಿದ್ದಲ್ಲಿ, ಯಾವ ಕಾರಣಕ್ಕಾಗಿ ಎಂಬುದನ್ನು ಸ್ಪಷ್ಟವಾಗಿ ತಿಳಿಸುವುದು; | ಯಾವುದೇ ಕಾಮಗಾರಿಯನ್ನು ತಡೆಹಿಡಿದಿರುವುದಿಲ್ಲ. |
| (ಇ) | ವಿಧಾನ ಪರಿಷತ್ ಶಾಸಕರ ಸ್ಥಳೀಯ ಪ್ರದೇಶ ಅಭಿವೃದ್ಧಿ ಅನುದಾನವನ್ನು ಮರುಬಳಕೆ ಮಾಡಿಕೊಳ್ಳಲು ಮಾರ್ಗಸೂಚಿಗಳಲ್ಲಿ ಅವಕಾಶ ಇದ್ದಲ್ಲಿ , ಮಾಹಿತಿ ನೀಡುವುದು; | ಎರಡು ವರ್ಷಕ್ಕೂ ಮೇಲ್ಪಟ್ಟು ಪ್ರಾರಂಭವಾಗದೇ ಇರುವ ಕಾಮಗಾರಿಗಳ ಅನುದಾನವನ್ನು ಕರ್ನಾಟಕ ಶಾಸಕರ ಸ್ಥಳೀಯ ಪ್ರದೇಶಾಭಿವೃದ್ಧಿ ಯೋಜನೆಯ ರಾಷ್ಟ್ರೀಕೃತ ಬ್ಯಾಂಕ್ ಖಾತೆಗೆ ಜಮೆ ಮಾಡಿದಲ್ಲಿ, ಜಮೆಯಾಗಿರುವ ಅನುದಾನವನ್ನು ಆಧ್ಯತಾನುಸಾರ ಸರ್ಕಾರದಿಂದ ಮರುಹಂಚಿಕೆ ಮಾಡಲಾಗುತ್ತದೆ. |
| (ಈ) | ಯಾವ ಯಾವ ಕಾರಣಾಂತರಗಳಿಂದ ಅನುದಾನವನ್ನು ತಡೆಹಿಡಿಯಲಾಗಿದೆ; (ಸೂಕ್ತ ಕಾರಣದೊಂದಿಗೆ ಮಾಹಿತಿ ನೀಡುವುದು) | ಕೆಲ್ಯಾಡ್ಸ್ ಯೋಜನೆಯ ಮಾರ್ಗಸೂಚಿ ಕಂಡಿಕೆ-4.1 ರ ಪ್ರಕಾರ ಎರಡು ವರ್ಷ ಮೇಲ್ಪಟ್ಟು ಪ್ರಾರಂಭವಾಗದೇ ಇರುವ ಕಾಮಗಾರಿಗಳ ಅನುದಾನವನ್ನು ಹಿಂಪಡೆಯಲಾಗುತ್ತದೆ. ಯಾವುದೇ ಕಾಮಗಾರಿಗಳನ್ನು ತಡೆಹಿಡಿದಿರುವುದಿಲ್ಲ. |

| | ಪ್ರಶ್ನೆ | ಉತ್ತರ |
|---|---|---|
| (ಊ) | ಎರಡು ವರ್ಷದ ಮೇಲ್ಪಟ್ಟು ಬಳಕೆಗೆ ಆಗದ ಕಾಮಗಾರಿಗಳ ಅನುದಾನವನ್ನು ಮರುಬಳಕೆ ಮಾಡಲು ಅವಕಾಶ ಮಾಡಿಕೊಡಲು ಅವಕಾಶ ನೀಡದಿರಲು ಕಾಣಗಳೇನು ? | ಅನುದಾನವನ್ನು ಮರುಬಳಕೆ ಮಾಡುವ ಕುರಿತು ಸ್ವೀಕೃತ ಪ್ರಸ್ತಾವನೆಗಳ ಬಗ್ಗೆ ಸರ್ಕಾರವು ಆಧ್ಯತಾನುಸಾರ ಅನುದಾನವನ್ನು ಮರುಹಂಚಿಕೆ ಮಾಡಲಾಗುತ್ತಿದೆ. |

**ಸಂಖ್ಯೆ: ಪಿಡಿಎಸ್/ 108/ಕೆಎಲ್ಎಸ್/2025**

**(ಡಿ. ಸುಧಾಕರ್)**
ಯೋಜನೆ, ಕಾರ್ಯಕ್ರಮ ಸಂಯೋಜನೆ
ಮತ್ತು ಸಾಂಖ್ಯಿಕ ಇಲಾಖಾ ಸಚಿವರು.